146ನೇ ಅಧಿವೇಶನ
ನಿ-330
ಕ್ರ-26
ಶೂನ್ಯವೇಳೆ

# ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕೆ.ಟಿ. ಶ್ರೀಕಂಠೇಗೌಡ ಇವರು ನಿಯಮ 330 ರಡಿಯಲ್ಲಿ ಗಮನ ಸೆಳೆಯುವ ಸೂಚನೆ

## ವಿಷಯ

ಯು.ಜಿ.ಸಿ. ಅರ್ಹತೆಯನ್ನು ಹೊಂದಿರುವ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರುಗಳಿಗೆ ಕಾಲೇಜು ಶಿಕ್ಷಣ ಇಲಾಖೆಯ ಪ್ರಥಮ ದರ್ಜೆ ಕಾಲೇಜುಗಳ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳಿಗೆ ಬಡ್ತಿ ನೀಡುವ ಬಗ್ಗೆ ಉನ್ನತ ಶಿಕ್ಷಣ ಇಲಾಖೆಯ ವೃಂದ ಮತ್ತು ನೇಮಕಾತಿಗೆ ತಿದ್ದುಪಡಿ ತಂದು ಬಡ್ತಿಗೆ ಅವಕಾಶ ಮಾಡುವ ವಿಷಯವನ್ನು ಮಾನ್ಯ ಉನ್ನತ ಶಿಕ್ಷಣ ಸಚಿವರಿಗೆ ಪ್ರಸ್ತಾಪಿಸಲು ಅನುಮತಿ ಕೋರಿ ಸದನದಲ್ಲಿ ಪ್ರಸ್ತಾಪಿಸಲು ಬಯಸುತ್ತೇನೆ.

## ಉತ್ತರ

ಕಾಲೇಜು ಶಿಕ್ಷಣ ಇಲಾಖೆಯ ವೃಂದ ಮತ್ತು ನೇಮಕಾತಿಗೆ ಸಂಬಂಧಿಸಿದಂತೆ, ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 91 ಡಿಸಿಇ 2004, ದಿನಾಂಕ:25.09.2009ರನ್ವಯ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಯು.ಜಿ.ಸಿ. ನಿಯಮಗಳನ್ವಯ ಶೇಕಡ 100 ರಷ್ಟು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪರಿಷ್ಕರಿಸಲಾಗಿರುತ್ತದೆ.

ಯು.ಜಿ.ಸಿ. ಶೈಕ್ಷಣಿಕ ಅರ್ಹತೆ ಹೊಂದಿ, ಪದವಿ ಪೂರ್ವ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಉಪನ್ಯಾಸಕರಿಗೆ ಸರ್ಕಾರಿ ಪದವಿ ಕಾಲೇಜುಗಳಲ್ಲಿ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ಬಡ್ತಿ ನೀಡುವ ಬಗ್ಗೆ ಕಾಲೇಜು ಶಿಕ್ಷಣ ಇಲಾಖೆಯ ಸಹಾಯಕ ಪ್ರಾಧ್ಯಾಪಕರ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ತರುವ ಕುರಿತು ದಿನಾಂಕ:02.08.2014ರಂದು ಅಂದಿನ ಉನ್ನತ ಶಿಕ್ಷಣ ಹಾಗೂ ಪ್ರವಾಸೋದ್ಯಮ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಆರ್ಥಿಕ ಇಲಾಖೆ, ಸಂಸದೀಯ ವ್ಯಹಾರಗಳು ಹಾಗೂ ಶಾಸನ ರಚನಾ ಇಲಾಖೆ ಹಾಗೂ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಅಧಿಕಾರಿಗಳು ಪಿಹೆಚ್‌ಡಿ/ ಎನ್‌ಇಟಿ/ ಎಸ್‌ಎಲ್‌ಇಟಿ/ ಎಂ.ಫಿಲ್ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಿ **ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಉಪನ್ಯಾಸಕರುಗಳಿಗೆ ಸರ್ಕಾರಿ ಪದವಿ ಕಾಲೇಜುಗಳ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ಪದೋನ್ನತಿ ನೀಡಲು ಅವಕಾಶವಿಲ್ಲ** ಎಂದು ನಿರ್ಣಯಿಸಿರುತ್ತಾರೆ.

ಮುಂದುವರೆದು, ಪದವಿ ಪೂರ್ವ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಉಪನ್ಯಾಸಕರು ಪದವಿ ಪೂರ್ವ ಶಿಕ್ಷಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಆಯ್ಕೆ ಹೊಂದಿ ರಾಜ್ಯ ವೇತನ ಶ್ರೇಣಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು ಹಾಗೂ ಸರ್ಕಾರಿ ಪದವಿ ಕಾಲೇಜುಗಳ ಸಹಾಯಕ ಪ್ರಾಧ್ಯಾಪಕರು ಯು.ಜಿ.ಸಿ. ವೇತನ ಶ್ರೇಣಿಯನ್ನು ಪಡೆಯುತ್ತಿದ್ದು. ವೇತನ ಶ್ರೇಣಿಗಳಲ್ಲಿ ವ್ಯತ್ಯಾಸವಿರುತ್ತದೆ. ಅಲ್ಲದೇ, ಯುಜಿಸಿ ನಿಯಮಗಳನ್ವಯ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ನೇರ ನೇಮಕಾತಿಯಿಂದ ಭರ್ತಿ ಮಾಡಲು ಮಾತ್ರ ಅವಕಾಶ ಕಲ್ಪಿಸಲಾಗಿದ್ದು, ಪದವಿ ಪೂರ್ವ ಕಾಲೇಜಿನ ಅರ್ಹ ಉಪನ್ಯಾಸಕರುಗಳನ್ನು ಪದವಿ ಕಾಲೇಜಿಗೆ ನೇರವಾಗಿ ಬಡ್ತಿ ನೀಡಲು ಯು.ಜಿ.ಸಿ ನಿಯಮಗಳಲ್ಲಿ ಅವಕಾಶ ಇರುವುದಿಲ್ಲ. ಆದ್ದರಿಂದ, ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರುಗಳನ್ನು ಸರ್ಕಾರಿ ಪದವಿ ಕಾಲೇಜುಗಳ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ಬಡ್ತಿ ನೀಡಲು ನಿಯಮಗಳಲ್ಲಿ ಅವಕಾಶಇರುವುದಿಲ್ಲ.

**ಇಡಿ 59 ಡಿಸಿಇ 2022**

**(ಡಾ. ಅಶ್ವಥ್ ನಾರಾಯಣ ಸಿ.ಎನ್.)**
**ಉನ್ನತ ಶಿಕ್ಷಣ, ಐ.ಟಿ.-ಬಿ.ಟಿ.ವಿಜ್ಞಾನ ಮತ್ತು ತಂತ್ರಜ್ಞಾನ, ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು**